ಆ)

ಶಿಕ್ಷಕರ ಮತ್ತು ಮಕ್ಕಳ ಅನುಪಾತವು 33: 38 ಇದ್ದು, ನಿಯಮಾನುಸಾರ ಇರುವುದಕ್ಕಿಂತ ಕಡಿಮೆ ಇರುತ್ತದೆ. 6 ಶಿಕ್ಷಕರ ಹುದ್ದೆಗಳು ಖಾಲಿ ಇದ್ದು; ಸದರಿ ಶಿಕ್ಷಕರ ನೇಮಕಾತಿ ಪ್ರಕ್ರಿಯೆ ಚಾಲನೆಯಲ್ಲಿದೆ.	ಪ್ರೌಢ ಶಾಲೆಗಳು ಇಲ್ಲ

840 ಶ್ರೀ ಅಭಯಚಂದ್ರ ಜೈನ್ .ಕೆ. : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೂಲ್ಕಿ –ಮೂಡುಬಿದ್ರೆ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಹಿರಿಯ/ಕಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕರುಗಳು ಪದೇ ಪದೇ ಸಭೆಗಳಲ್ಲಿ ಭಾಗವಹಿಸುತ್ತಿರುವುದರಿಂದ ವಿದ್ಯಾರ್ಥಿಗಳ ವ್ಯಾಸಂಗಕ್ಕೆ ಅಡಚಣೆ ಉಂಟಾಗುತ್ತಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಬಗ್ಗೆ ಯಾವ ಕ್ರಮಗಳನ್ನು ಕೈಗೊಳ್ಳಲಾಗುವುದು?

ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಇಲ್ಲ

ಆ) ಯಾವುದಾದರೂ ನಿರ್ದಿಷ್ಟ ಪ್ರಕರಣಗಳಿದ್ದು, ಮಾಹಿತಿ ನೀಡಿದಲ್ಲಿ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

502 ಶ್ರೀ ಕೃಷ್ಣಮೂರ್ತಿ ಕೆ.ಎಂ. : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣದ ಅಭಿವೃದ್ಧಿಗಾಗಿ ಸರ್ಕಾರ ಕೈಗೊಂಡಿರುವ ವಿವಿಧ ಕಾರ್ಯಕ್ರಮಗಳು ಯಾವುದು?

ಆ) ಪ್ರಾಥಮಿಕ ಶಿಕ್ಷಣದ ಶೈಕ್ಷಣಿಕ ಗುಣಮಟ್ಟದ ಅಭಿವೃದ್ಧಿಗಾಗಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

ಇ) ಭಾಷಾ ಮಾಧ್ಯಮ ಬಗ್ಗೆ ಸರ್ಕಾರದ ನಿಲುವೇನು; ಸರ್ಕಾರದ ಆದೇಶವನ್ನು ಮೀರಿ ನಡೆಯುತ್ತಿರುವ ವಿದ್ಯಾಸಂಸ್ಥೆಗಳ ವಿರುದ್ಧ ಸರ್ಕಾರ ಯಾವ್ಯಾವ ಕ್ರಮಗಳನ್ನು ಕೈಗೊಂಡಿದೆ;

ಈ) ಹಿಂದಿ ಭಾಷಾ ಶಿಕ್ಷಕರನ್ನು ಪ್ರಾಥಮಿಕ ಶಾಲೆಯಿಂದ ಪ್ರೌಢಶಾಲೆಗೆ ಮುಂಬಡ್ತಿ ನೀಡುವಾಗ (ಬೇರೆ ಶಿಕ್ಷಕರಿಗಿಂತ) ಮಲತಾಯಿ ಧೋರಣೆ ಅನುಸರಿಸುತ್ತಿರುವುದು ನಿಜವೇ;

ಉ) ಹಾಗಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮದ ಬಗ್ಗೆ ಮಾಹಿತಿ ನೀಡುವುದು;

ಎಚ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಎಲ್ಲಾ ಶಾಲೆಗಳಿಗೂ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಕ್ರಮ ಕೈಗೊಳ್ಳಲಾಗುತ್ತಿವೆ. ಮಧ್ಯಾಹ್ನ ಉಪಹಾರ ಯೋಜನೆ, ಉಚಿತ ಪಠ್ಯಪುಸ್ತಕ, ಸಮವಸ್ತ್ರ, ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ಶಾಲಾ ನೋಟ್‌ಪುಸ್ತಕ, ಸ್ಕೂಲ್ ಬ್ಯಾಗ್, 8 ನೇ ತರಗತಿಯ ಮಕ್ಕಳಿಗೆ ಸೈಕಲ್ ನೀಡುವ ಯೋಜನೆ, ಸರ್ವ ಶಿಕ್ಷಣ ಅಭಿಯಾನದ ಕಾರ್ಯಕ್ರಮಗಳ ಮತ್ತು ಆರ್.ಎಂ.ಎಸ್.ಎ. (ಕೇಂದ್ರ ಸರ್ಕಾರ) ಗಳ ಮೂಲಕ ಅಭಿವೃದ್ಧಿ ಮಾಡಲಾಗುತ್ತಿದೆ.

ಆ) ಒಂದು ಮತ್ತು ಎರಡನೇ ತರಗತಿಗೆ ಸರ್ಕಾರಿ ಶಾಲೆಗಳಲ್ಲಿ ನಲಿ–ಕಲಿ ಪದ್ಧತಿ ಅಳವಡಿಸಲಾಗುತ್ತಿದೆ. ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗೆ ಪರಿಹಾರಬೋಧನಾ ಕಾರ್ಯವನ್ನು ತೆಗೆದುಕೊಳ್ಳಲಾಗುತ್ತಿದೆ.

ಇ) ಸರ್ಕಾರದ ಆದೇಶ ಸಂಖ್ಯೆ: ಇಡಿ 28 ಪಿಜಿಸಿ 1994, ದಿನಾಂಕ: 29.04.1994 ರಂತೆ 1 ರಿಂದ 5ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ಅನುಮತಿ ಪಡೆದು ಆಂಗ್ಲ ಮಾಧ್ಯಮದಲ್ಲಿ ಬೋಧಿಸುತ್ತಿದ್ದ ಶಿಕ್ಷಣ ಸಂಸ್ಥೆಗಳ ಶಾಲೆಗಳ ವಿರುದ್ಧ ಕ್ರಮವಹಿಸಲು ಸರ್ಕಾರವು ತ್ರಿ ಸದಸ್ಯರ ಸಮಿತಿಯ ತಂಡವನ್ನು ರಚಿಸಿ ಆ ತಂಡವು ನಿಯಮ ಉಲ್ಲಂಘಿಸಿದಂತಹ ಶಾಲೆಗಳನ್ನು ಗುರುತಿಸಿದ್ದು, ಅಂತಹ ಶಾಲೆಗಳ ಮಾನ್ಯತೆಯನ್ನು ರದ್ದುಪಡಿಸಲಾಗಿರುತ್ತದೆ ಮಾನ್ಯತೆ ರದ್ದಾಂತಹ ಶಾಲೆಗಳಿಗೆ ಸರ್ಕಾರವು ದಂಡ ಶುಲ್ಕ ಪಾವತಿಸಿ ಸ್ವ–ಇಚ್ಛಾ ಯೋಜನೆಯನ್ನು ಅಳವಡಿಸಿಕೊಂಡು ಪುನರ್ ಮಾನ್ಯತೆಯನ್ನು ಪಡೆಯಲು ಅವಕಾಶ ಕಲ್ಪಿಸಲಾಗಿರುತ್ತದೆ. ಕೆಲವು ಶಿಕ್ಷಣ

ಸಂಸ್ಥೆಗಳು ದಂಡ ಶುಲ್ಕ ಪಾವತಿಸಿ ಪುನರ್ ಮಾನ್ಯತೆಯನ್ನು ಪಡೆದು ಕೊಂಡಿವೆ. ಇನ್ನೂ ಕೆಲವು ಶಾಲೆಗಳು ದಂಡ ಶುಲ್ಕ ಪಾವತಿಸದೆ ನ್ಯಾಯಾಲಯಕ್ಕೆ ಮೊರೆ ಹೋಗಿರುತ್ತವೆ. ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ: 02.07.2008 ರಂದು ಈ ಬಗ್ಗೆ ಅಂತಿಮ ತೀರ್ಪು ನೀಡಿದ್ದು, ಸದರಿ ತೀರ್ಪು ಸರ್ಕಾರದ ಆದೇಶದ ವಿರುದ್ಧವಾಗಿರುವುದರಿಂದ ಈ ತಿರ್ಪನ್ನು ಪ್ರಶ್ನಿಸಿ ರಾಜ್ಯ ಸರ್ಕಾರವು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಎಸ್.ಎಲ್.ಪಿ. ದಾಖಲಿಸಿದ್ದು, (ಸಂಖ್ಯೆ: 18139–18163/08 ಮತ್ತು 15640–15648/09) ವಿವಿಧ ದಿನಾಂಕಗಳಂದು ವಿಚಾರಣೆಗೆ ಬಂದಿದ್ದು, ದಿನಾಂಕ: 24.07.2009ರಂದು ಸರ್ವೋಚ್ಚ ನಾಯಾಲಯವು ಯಾವುದೇ ಶಾಲೆಗಳನ್ನು ಮುಚ್ಚದಂತೆ ಆದೇಶಿಸಿರು ವುದರಿಂದ ಅಂತಹ ಶಾಲೆಗಳ ವಿರುದ್ಧ ಯಾವುದೇ ಕ್ರಮ ಜರುಗಿಸಲು ಸಾಧ್ಯವಾಗಿರುವುದಿಲ್ಲ.

ಸದರಿ ಪ್ರಕರಣವು ವಿಚಾರಣಾ ಹಂತದಲ್ಲಿದ್ದು, ಅಂತಿಮ ಆದೇಶದ ತೀರ್ಪನ್ನು ಅನುಸರಿಸಿ ಮುಂದಿನ ಕ್ರಮವಹಿಸಲಾಗುವುದು. ಪ್ರಸ್ತುತ ಸರ್ಕಾರದ ಆದೇಶದನ್ವಯ ಒಂದನೇ ತರಗತಿಯಿಂದ ಐದನೇ ತರಗತಿ ಯವರೆಗೆ ಕನ್ನಡ ಮಾಧ್ಯಮದಲ್ಲಿಯೇ ಶಿಕ್ಷಣ ನೀಡಬೇಕೆಂಬುದು ಸರ್ಕಾರದ ನಿಲುವಾಗಿರುತ್ತದೆ.

ಈ) ಇಲ್ಲ.

ಉ) ಉದ್ಭವಿಸುವುದಿಲ್ಲ.

832 ಶ್ರೀ ಹ್ಯಾರಿಸ್ ಎನ್.ಎ : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿನ ಎಷ್ಟು ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ವಿದ್ಯಾರ್ಥಿಗಳ ಕೊರತೆಯನ್ನು ಎದುರಿಸುತ್ತಿವೆ; ಕೊರತೆಗೆ ವಾಸ್ತವಿಕ ಕಾರಣಗಳೇನು;

ಆ) ಕನ್ನಡ ಮತ್ತು ಆಂಗ್ಲ ಮಾಧ್ಯಮ ಶಾಲೆಗಳ ಶೈಕ್ಷಣಿಕ ಆಕರ್ಷಣೆಯಿಂದಾಗಿ ವಿದ್ಯಾರ್ಥಿಗಳ ಕೊರತೆಯನ್ನು ಎದುರಿಸುತ್ತಿರುವುದು ನಿಜವೇ;

ಇ) ಹಾಗಿದ್ದಲ್ಲಿ, ರಾಜ್ಯದಲ್ಲಿ ಕನ್ನಡ ಮಾಧ್ಯಮ ಶಾಲೆಗಳತ್ತ ಜನಸಾಮಾನ್ಯರ ಗಮನವನ್ನು ಸೆಳೆಯಲು ಸರ್ಕಾರದ ಸಕಾಲಿಕ ಕ್ರಮಗಳೇನು;